ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

35 (123) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರವು ರೈತರಿಗೆ ಅವರು ಬೆಳೆಯುವ ಭತ್ತ, ರಾಗಿ. ಜೋಳ ಹಾಗೂ ಇನ್ನಿತರ ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ (MSP-Minimum Supporting Price) ನೀಡಿ ಆದೇಶ ಹೊರಡಿಸಿದಂತೆ ರಾಜ್ಯದಲ್ಲಿ ರೈತರಿಗೆ ಅವರ ಬೆಳೆಗಳಿಗೆ ನಿಗಧಿತ ಬೆಂಬಲ ಬೆಲೆ ನೀಡುವ ಮತ್ತು ಖರೀದಿಸುವ ಬಗ್ಗೆ ಸರ್ಕಾರದ ನಿಲುವೇನು;

(ಆ) ಹಾಗಿದ್ದಲ್ಲಿ, ಯಾವ ದರದಲ್ಲಿ ಸದರಿ ಬೆಳೆಗಳನ್ನು ಖರೀದಿ ಮಾಡಲಾಗುತ್ತಿದೆ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಎಷ್ಟು ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ; (ಪ್ರಾರಂಭಗೊಂಡ ದಿನಾಂಕ ಸಹಿತ ವಿವರ ನೀಡುವುದು)

(ಈ) ಸದರಿ ಖರೀದಿ ಕೇಂದ್ರಗಳಲ್ಲಿ ಖರೀದಿಸಲಾದ ಒಟ್ಟು ಪ್ರಮಾಣ ಎಷ್ಟು? (ಬೆಳೆವಾರು, ಕೇಂದ್ರವಾರು ವಿವರ ನೀಡುವುದು)